ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 23ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತೆರಡನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತೆರಡನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) **ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:–**

ಭಾರತ ಸಂವಿಧಾನದ 151ನೇ ಅನುಚ್ಛೇದದ ಮೇರೆಗೆ, ಮಾರ್ಚ್ 2021ಕ್ಕೆ ಕೊನೆಗೊಂಡ ವರ್ಷದ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ:1) ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯಾ.

... 2/

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎಂ. ಕೃಷ್ಣಾರೆಡ್ಡಿ, ಸುರೇಶ್‌ಗೌಡ, ವೆಂಕಟರಾವ್ ನಾಡಗೌಡ, ಬಂಡೆಪ್ಪ ಖಾಶೆಂಪೂರ್ ಹಾಗೂ ಇತರರು – ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ಶಾಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

ಹಾಗೂ

ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ. ಅಜಯ್ ಧರ್ಮಸಿಂಗ್, ಎಂ.ಬಿ. ಪಾಟೀಲ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ಹಾಗೂ ಇತರರು – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸುತ್ತಿರುವ ವಿದ್ಯಮಾನಗಳಿಂದ ಕುಸಿದು ಬೀಳುತ್ತಿರುವ ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ವಿತ್ತೀಯ ಕಾರ್ಯಕಲಾಪ

ಅ) 2022–23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು.

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ

ಆ) 2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ.

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
02	ಪಶು ಸಂಗೋಪನೆ ಮತ್ತು ಮೀನುಗಾರಿಕೆ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
15	ಮಾಹಿತಿ ತಂತ್ರಜ್ಞಾನ
16	ವಸತಿ
17	ಶಿಕ್ಷಣ
18	ವಾಣಿಜ್ಯ ಮತ್ತು ಕೈಗಾರಿಕೆ
19	ನಗರಾಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಪಡುಬಿದ್ರಿ ಗ್ರಾಮದಲ್ಲಿ ಸುಝುಲಾನ್ ಸಂಸ್ಥೆಯ ಅನುಪಯುಕ್ತ ಜಾಗವನ್ನು ಕಸ ವಿಲೇವಾರಿ ಮಾಡಲು ಪಡುಬಿದ್ರಿ ಗ್ರಾಮ ಪಂಚಾಯತ್‌ಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಬಸನಗೌಡ ತುರುವಿಹಾಳ್ ಅವರು** – ರಾಯಚೂರು ಜಿಲ್ಲೆಯ ವಿವಿಧ ತಾಲ್ಲೂಕಿನ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಎನ್.ಆರ್.ಬಿ.ಸಿ. 5ಎ ಕಾಲುವೆಯ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎ.ಟಿ. ರಾಮಸ್ವಾಮಿ ಅವರು** – ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು ಕಡಿತಗೊಳಿಸಿರುವುದರಿಂದ ಉದ್ಭವಿಸುವ ಸಾಧಕ-ಬಾಧಕಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 4/

4) **ಶ್ರೀ ಸುನಿಲ್ ಬಿಳಿಯಾ ನಾಯ್ಕ ಅವರು** – ಉತ್ತರ ಕನ್ನಡ ಭಟ್ಕಳ ತಾಲ್ಲೂಕಿನ ಭಟ್ಕಳ ಬಸ್ ನಿಲ್ದಾಣದ ಕಟ್ಟಡದ ಸುತ್ತಲೂ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಅಖಂಡ ಶ್ರೀನಿವಾಸ್ ಮೂರ್ತಿ ಅವರು** – ಪುಲಕೇಶಿನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ವಿವಿಧ ವಾರ್ಡ್‌ಗಳಿಗೆ ವಾರಕ್ಕೆ ಮೂರು ಬಾರಿ ಕಾವೇರಿ ನೀರನ್ನು ಒದಗಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಾಹನ ಚಾಲಕರು, ವಾಟರ್ ಮ್ಯಾನ್ ಮತ್ತು ಡಾಟಾ ಆಪರೇಟರ್‌ಗಳಿಗೆ ಗುತ್ತಿಗೆ ಬದಲು ಪೌರಕಾರ್ಮಿಕರ ಮಾದರಿಯಲ್ಲಿ ನೇರ ವೇತನ ಜಾರಿಗೊಳಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೃಷ್ಣ ಬೈರೇಗೌಡ ಅವರು** – ಬೆಂಗಳೂರಿನಲ್ಲಿ ಅನುಮತಿ ಇಲ್ಲದೆ ನಿರ್ಮಿಸುವ ಮನೆಗಳನ್ನು ಸಕ್ರಮಗೊಳಿಸಲು ಕಾನೂನು ಅಂಗೀಕಾರವಾಗಿದ್ದರೂ ಸಹ ಸದರಿ ಮನೆಗಳು ಅಕ್ರಮವೆಂದು ಪರಿಗಣಿಸಿ ಕ್ರಮ ಕೈಗೊಳ್ಳಲಾಗುವುದೆಂದು ಬಿ.ಬಿ.ಎಂ.ಪಿ ವತಿಯಿಂದ ನೋಟೀಸ್ ಜಾರಿ ಮಾಡುತ್ತಿರುವುದರಿಂದ ಸಾಮಾನ್ಯ ವರ್ಗದ ಜನರಿಗೆ ಆತಂಕ ಉಂಟಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8) **ಶ್ರೀ ಸಾ.ರಾ. ಮಹೇಶ್ ಅವರು** – ಮೈಸೂರು ಜಿಲ್ಲೆಯ ಕೆ.ಆರ್. ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೆ.ಆರ್. ನಗರ ಹಾಗೂ ಸಾಲಿಗ್ರಾಮ ಅವಳಿ ತಾಲ್ಲೂಕುಗಳ ಜನರಿಗೆ ಮೇ–2021ರ ಮಾಹೆಯಿಂದ ಸೀಮೆಎಣ್ಣೆ ವಿತರಿಸದೇ ಇರುವ ಬಗ್ಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm